55

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಶರಣಪ್ಪ ಮಟ್ಟೂರು ಹಾಗೂ ಶ್ರೀ ಅಲ್ಲಂ ವೀರಭದ್ರಪ್ಪ ಇವರುಗಳು ನಿಯಮ 330ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.

*******

ವಿಷಯ:

ಕಲಬುರಗಿಯಲ್ಲಿರುವ ಕರ್ನಾಟಕ ಸೆಂಟ್ರಲ್ ಯೂನಿವರ್ಸಿಟಿಯಲ್ಲಿ ಇರುವ 30 ವಿಭಾಗಗಳಲ್ಲಿ 67 ಪ್ರಾಧ್ಯಾಪಕರು ಮತ್ತು ಸಹ ಪ್ರಾಧ್ಯಾಪಕರುಗಳ ನೇಮಕಾತಿಯನ್ನು ಯು.ಜಿ.ಸಿ. ಮಾರ್ಗಸೂಚಿಗೆ ವಿರುದ್ಧವಾಗಿ ಸದರಿ ಹುದ್ದೆಗೆ ಅವಶ್ಯ ಇರುವ ವಿದ್ಯಾರ್ಹತೆಯನ್ನು ಗಣನೆಗೆ ತೆಗೆದುಕೊಳ್ಳದಿರುವ ಹಾಗೂ ಇದರಿಂದ ಅರ್ಹ ಅಭ್ಯರ್ಥಿಗಳು ವಂಚಿತರಾಗಿರುವುದರಿಂದ ಸದರಿ ಪ್ರಕ್ರಿಯೆಯನ್ನು ತಡೆಹಿಡಿಯುವ ಬಗ್ಗೆ ಮತ್ತು ನ್ಯಾಯ ಸಮ್ಮತವಾಗಿ ಯು.ಜಿ.ಸಿ. ಮಾರ್ಗಸೂಚಿಯನ್ವಯ ನೇಮಕಾತಿ ಪ್ರಕ್ರಿಯೆ ನಡೆಸುವ ಬಗ್ಗೆ.

## ಸರ್ಕಾರದ ಉತ್ತರ

ಕೇಂದ್ರ ಸರ್ಕಾರದ ಶಾಸನದ ಮೂಲಕ ರಚಿಸಲ್ಪಟ್ಟ ವಿಶ್ವವಿದ್ಯಾಲಯವಾಗಿದ್ದು, ಈ ಕೇಂದ್ರ ವಿಶ್ವವಿದ್ಯಾಲಯವು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ ಹಾಗೂ ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ ನೇರ ನಿಯಂತ್ರಣಕ್ಕೆ ಒಳಪಡುತ್ತದೆ.

ಕಲಬುರಗಿಯಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸಿಬ್ಬಂದಿ ನೇಮಕಾತಿ, ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಪ್ರಕಾರ್ಯಗಳ ಮೇಲೆ ರಾಜ್ಯ ಸರ್ಕಾರವು ಯಾವುದೇ ಅಧಿಕಾರ ವ್ಯಾಪ್ತಿ ಹೊಂದಿರುವುದಿಲ್ಲ.

ಮುಂದುವರೆದು, ಸರ್ಕಾರದ ಆದೇಶ ಸಂ. ಇಡಿ 32 ಯುಜಿವಿ 2015, ದಿನಾಂಕ: 17-06-2015ರಲ್ಲಿ ಕಲಬುರಗಿಯಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯಕ್ಕೆ ಸಮರ್ಪಕ ಕುಡಿಯುವ ನೀರು ಪೂರೈಕೆ, ವಿದ್ಯುತ್ ಪೂರೈಕೆ, ರಸ್ತೆ ಮತ್ತು ಕಾನೂನು ಸುವ್ಯವಸ್ಥೆಯ ಕುರಿತು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಮೇಲುಸ್ತುವಾರಿ ಸಮಿತಿಯನ್ನು ರಚಿಸಲಾಗಿದ್ದು, ಈ ಮೂಲಭೂತ ಸೌಕರ್ಯಗಳ ಬಗ್ಗೆ ಮಾತ್ರ ರಾಜ್ಯ ಸರ್ಕಾರವು ಕ್ರಮವಹಿಸುತ್ತಿದೆ.

---

ಸಂ. ಇಡಿ 21 ಯುಜಿವಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)

ಉಪ ಮುಖ್ಯಮಂತ್ರಿಗಳು

(ಉನ್ನತ ಶಿಕ್ಷಣ, ಐಟಿ & ಬಿಟಿ,

ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,

ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)